## <u>ಕರ್ನಾಟಕ ಸರ್ಕಾರದ ನಡವಳಿಗಳು</u>

**<u>ವಿಷಯ:</u>** ಬೀದರ್ ವಾಯುಪಡೆಯ (ರಕ್ಷಣಾ) ವಿಮಾನ ನಿಲ್ದಾಣದ ಅಭಿವೃದ್ಧಿಗಾಗಿ ಬೀದರ್ ತಾಲ್ಲೂಕಿನ ಚಿದ್ರಿ ಗ್ರಾಮದ ಸರ್ವೆ ನಂ.250/3,203,248/2 ಹಾಗೂ 205/2 ಗಳಲ್ಲಿ ಒಟ್ಟು 13 ಎಕರೆ 35 ಗುಂಟೆ ವಿಸ್ತೀರ್ಣದ ಜಮೀನನ್ನು ನೇರ ಖರೀದಿಯ ಮೂಲಕ ಭೂಸ್ವಾಧೀನಪಡಿಸಿಕೊಳ್ಳಲು ಅನುದಾನ ಬಿಡುಗಡೆ ಮಾಡುವ ಬಗ್ಗೆ.

**<u>ಓದಲಾಗಿದೆ:</u>**
1. ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಐ.ಐ.ಡಿ.ಸಿ ಇವರ ಪತ್ರ ಸಂಖ್ಯೆ: ಕಾ.ನಿ/ ಐಪಿಡಿ/ಬೀವಿನಿ/ 1682/ 2018-19, ದಿನಾಂಕ: 30.01.2019.
2. ಸರ್ಕಾರಿ ಆದೇಶ ಸಂಖ್ಯೆ:ಮೂಅಇ 35 ರಾಅವಿ 2018. ದಿನಾಂಕ:23.02.2019.

******

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಪತ್ರದಲ್ಲಿ, ಕೆ.ಎಸ್.ಐ.ಐ.ಡಿ.ಸಿ ಇವರು ಬೀದರ್ ವಾಯುಪಡೆಯ (ರಕ್ಷಣಾ) ವಿಮಾನ ನಿಲ್ದಾಣ ಅಭಿವೃದ್ಧಿಗಾಗಿ ಮೊದಲ ಹಂತದಲ್ಲಿ ಬೀದರ ತಾಲ್ಲೂಕಿನ ಚಿದ್ರಿ ಗ್ರಾಮದ ಸರ್ವೆ ನಂ.250/3,203,248/2 ಹಾಗೂ 205/2 ಗಳಲ್ಲಿ 13 ಎಕರೆ 35 ಗುಂಟೆ ಜಮೀನನ್ನು ನೇರ ಖರೀದಿಯ ಕಾರ್ಯವಿಧಾನದ ಮೂಲಕ ಭೂಸ್ವಾಧೀನಪಡಿಸಿಕೊಳ್ಳಲು ಅವಶ್ಯವಿರುವ ಮೊತ್ತ ರೂ.13,24,50,000/- ಗಳನ್ನು ಜಿಲ್ಲಾಧಿಕಾರಿಗಳಿಗೆ ನೇರವಾಗಿ ಬಿಡುಗಡೆ ಮಾಡಲು ಕೋರಿರುತ್ತಾರೆ.

2. ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಸರ್ಕಾರಿ ಆದೇಶದಲ್ಲಿ ಬೀದರ್ ವಿಮಾನ ನಿಲ್ದಾಣದ ಅಭಿವೃದ್ಧಿಗಾಗಿ ಮೊದಲ ಹಂತದಲ್ಲಿ ಬೀದರ್ ತಾಲ್ಲೂಕಿನ ಚಿದ್ರಿ ಗ್ರಾಮದ ಸರ್ವೆ ನಂ.250/3,203,248/2 ಹಾಗೂ 205/2 ಗಳಲ್ಲಿ 13 ಎಕರೆ 35 ಗುಂಟೆ ಜಮೀನನ್ನು ನೇರ ಖರೀದಿಯ ಮೂಲಕ ಭೂಸ್ವಾಧೀನಪಡಿಸಿಕೊಳ್ಳಲು ರೂ.13,00,00,000/-ಗಳನ್ನು ಜಿಲ್ಲಾಧಿಕಾರಿ, ಬೀದರ್ ಜಿಲ್ಲೆ, ಬೀದರ್ ಇವರಿಗೆ ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಐ.ಐ.ಡಿ.ಸಿ ಇವರ ಮೂಲಕ ಬಿಡುಗಡೆಗೊಳಿಸಲಾಗಿದ್ದು, ಪ್ರಸ್ತುತ

.....2

ಆರ್ಥಿಕ ಸಾಲು 2019-20 ರಲ್ಲಿ ಬಾಕಿ ಮೊತ್ತ ರೂ.24,50,000/- ಅನುದಾನವನ್ನು ಬಿಡುಗಡೆಗೊಳಸಬೇಕಾಗಿದ್ದು, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ. ಮೂಅಇ 35 ರಾಅವಿ 2018,**
**ಬೆಂಗಳೂರು, ದಿನಾಂಕ:02.05.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೀದರ್ ವಾಯುಪಡೆಯ (ರಕ್ಷಣಾ) ವಿಮಾನ ನಿಲ್ದಾಣ ಅಭಿವೃದ್ಧಿಗಾಗಿ ಮೊದಲ ಹಂತದಲ್ಲಿ ಬೀದರ್ ತಾಲ್ಲೂಕಿನ ಚಿದ್ರಿ ಗ್ರಾಮದ ಸರ್ವೆ ನಂ.250/3,203,248/2 ಹಾಗೂ 205/2 ಗಳಲ್ಲಿ 13 ಎಕರೆ 35 ಗುಂಟೆ ಜಮೀನನ್ನು ನೇರ ಖರೀದಿಯ ಮೂಲಕ ಭೂಸ್ವಾಧೀನಪಡಿಸಿಕೊಳ್ಳಲು ಬಿಡುಗಡೆ ಮಾಡಬೇಕಾದ ಬಾಕಿ ಮೊತ್ತ ರೂ.24,50,000/-ಗಳನ್ನು (ಇಪ್ಪತ್ನಾಲು ಲಕ್ಷದ ಐವತ್ತು ಸಾವಿರ ರೂಪಾಯಿಗಳು ಮಾತ್ರ) ಜಿಲ್ಲಾಧಿಕಾರಿಗಳು ಬೀದರ್ ಜಿಲ್ಲೆ, ಬೀದರ್ ಇವರಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿಯನ್ನು ನೀಡಲಾಗಿದೆ.

> **"ಈಗಾಗಲೇ ಬಿಡುಗಡೆ ಮಾಡಲಾಗಿರುವ ಅನುದಾನಕ್ಕೆ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸುವ ಷರತ್ತಿಗೊಳಪಟ್ಟು ಹಾಗೂ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಖಚಿತಪಡಿಸಿಕೊಂಡು ಬಿಡುಗಡೆಗೊಳಸುವುದು"**.

2. ಈ ಮೊತ್ತವನ್ನು 2019-20 ನೇ ಸಾಲಿನ ಲೆಕ್ಕಶೀರ್ಷಿಕೆ "5465-01-190-1-05-132-ಸಣ್ಣ ವಿಮಾನ ನಿಲ್ದಾಣಗಳ ಅಭಿವೃದ್ಧಿ - ಬಂಡವಾಳ ವೆಚ್ಚಗಳು" ರಡಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

3. ಈ ಮೊತ್ತವನ್ನು ಜಿಲ್ಲಾಧಿಕಾರಿಗಳು, ಬೀದರ್ ಜಿಲ್ಲೆ, ಬೀದರ್ ಇವರ ಖಾತೆಗೆ ಖಜಾನೆ-2 ರಲ್ಲಿ ಅಪ್‌ಲೋಡ್ ಮಾಡುವುದು

4 ಈ ಆದೇಶವನ್ನು ಆರ್ಥಿಕ ಇಲಾಖೆಯ ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2019, ದಿನಾಂಕ:03.04.2019ರ ಅಪರ ಮುಖ್ಯಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಯರವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದ ಪ್ರತ್ಯಾಯೋಜನೆಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Sd/-

**(ಬಿ.ಎಸ್.ಮಂಜುನಾಥ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಮೂಲಸೌಲಭ್ಯ ಅಭಿವೃದ್ಧಿ ಇಲಾಖೆ.

ಗೆ:

1. ಪ್ರಧಾನ ಮಹಾಲೇಖಪಾಲರು (ಆಡಿಟ್ –1, 2, 3/ A & E), ಪ್ರಧಾನ ಮಹಾಲೇಖಪಾಲರ ಕಛೇರಿ (ಕರ್ನಾಟಕ), ಎ.ಎ.ಡಿ. ಸೆಕ್ಷನ್, ಮೈನ್ ಬಿಲ್ಡಿಂಗ್, ಕೆ.ಪಿ.ಎಸ್.ಸಿ. ಕಛೇರಿ ಎದುರು, ಬೆಂಗಳೂರು –01.



2. ವ್ಯವಸ್ಥಾಪಕ ನಿರ್ದೇಶಕರು, ಕೆಎಸ್ಐಐಡಿಸಿ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು
3. ಜಿಲ್ಲಾಧಿಕಾರಿಗಳು, ಬೀದರ್ ಜಿಲ್ಲೆ, ಬೀದರ್.
4. ನಿರ್ದೇಶಕರು, ಖಜಾನೆ ಇಲಾಖೆ, ವಿ.ವಿ. ಗೋಪುರ, ಬೆಂಗಳೂರು.
5. ಯೋಜನಾ ನಿರ್ದೇಶಕರು, ಖಜಾನೆ-2, ಗಾಂಧಿನಗರ, ಬೆಂಗಳೂರು.
6. ಹಿರಿಯ ನಿರ್ದೇಶಕರು, ಯೋಜನೆ ಹಾಗೂ ಸಂಪನ್ಮೂಲ ವಿಭಾಗ, ಯೋಜನೆ ಇಲಾಖೆ, ಬೆಂಗಳೂರು.
7. ನಿರ್ದೇಶಕರು, PM & I ವಿಭಾಗ, ಯೋಜನಾ ಇಲಾಖೆ.
8. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ. ಖನಿಜ ಭವನ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-1).

ಪ್ರತಿ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಮೂಲಸೌಲಭ್ಯ ಅಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕಿ, ಮೂಲಸೌಲಭ್ಯ ಅಭಿವೃದ್ಧಿ ಇಲಾಖೆ. ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ-1, ಮೂಲಸೌಲಭ್ಯ ಅಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಅಧೀನ ಕಾರ್ಯದರ್ಶಿ-2(ಸಮನ್ವಯ) ಮೂಲಸೌಲಭ್ಯ ಅಭಿವೃದ್ಧಿ ಇಲಾಖೆ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲು.
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.